# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್.ರಸ್ತೆ, ತುಮಕೂರು-572 103 ☏ : 0816-2255650, 2273511 ಫ್ಯಾಕ್ಸ್ :0816-2270719

ಸಂಖ್ಯೆ:ತುವಿ: ಪ.ವಿ:ಯು.ಜಿ.:ಪ.ಶುಲ್ಕ.:ವಿ.ನಿ.-04/2020-21 : 571 ದಿನಾಂಕ: 07.01.2021

## ಅಧಿಸೂಚನೆ

ವಿಷಯ: 2020 ರ ಅಕ್ಟೋಬರ್ ಮಾಹೆಯಲ್ಲಿ ನಡೆದ ಸ್ನಾತಕ ಶಿಕ್ಷಣ ಪದವಿ ಪರೀಕ್ಷೆಗಳಿಗೆ ಪರೀಕ್ಷಾ ಶುಲ್ಕ ಪಾವತಿಸಲು ಸಾಧ್ಯವಾಗದಿರುವ ಎಲ್ಲಾ ಅರ್ಹ ವಿದ್ಯಾರ್ಥಿಗಳಿಂದ ಪರೀಕ್ಷಾ ಶುಲ್ಕ ಪಾವತಿಸಿಕೊಳ್ಳುವ ಕುರಿತು.

ಉಲ್ಲೇಖ: 1. ಸಂಖ್ಯೆ:ತುವಿ: ಪ.ವಿ:ಬಿ.ಇಡಿ.:ಪ.ಶುಲ್ಕ.2020-21: 318 ದಿನಾಂಕ: 01.10.2020

2.UGC D.O.Letter No. F.1-1/2020(Secy), Dated:08.07.2020

3.Governement Order No. ED/197/UNE/2020, Bangalore, Dated:10.07.2020

4.ಮಾನ್ಯ ಕುಲಪತಿಯವರ ಅನುಮೋದನೆಯ ದಿನಾಂಕ: 06.01.2021

*****

ತುಮಕೂರು ವಿಶ್ವವಿದ್ಯಾನಿಲಯವು 2020 ರ ಅಕ್ಟೋಬರ್ ಮಾಹೆಯಲ್ಲಿ ಸ್ನಾತಕ ಶಿಕ್ಷಣ ಪದವಿ ಪರೀಕ್ಷೆಗಳನ್ನು ದಿನಾಂಕ:19.10.2020 ಂದ ದಿನಾಂಕ:23.10.2020 ರವರೆಗೆ ನಡೆಸಲಾಗಿರುತ್ತದೆ. ಸದರಿ ಪರೀಕ್ಷೆಗಳಿಗೆ **ಕೋವಿಡ್-19 ಅಥವಾ ಇತರೆ ಯಾವುದೇ ಕಾರಣಗಳಿಂದ** ಪರೀಕ್ಷಾ ಶುಲ್ಕ ಪಾವತಿಸಲು ಸಾಧ್ಯವಾಗದಿರುವ ಮತ್ತು ಪರೀಕ್ಷಾ ಶುಲ್ಕ ಪಾವತಿಸಿ ಕಾರಣಾಂತರಗಳಿಂದ ಪರೀಕ್ಷೆಗಳಿಗೆ ಹಾಜರಾಗಲು ಸಾಧ್ಯವಾಗದಿರುವ **(ವಿಷಯ ಅಥವಾ ಪೂರ್ಣ ಪರೀಕ್ಷೆ)** ವಿದ್ಯಾರ್ಥಿಗಳಿಗೆ ಉಲ್ಲೇಖ (2 & 3) ರನ್ವಯ ಮತ್ತೊಮ್ಮೆ ಪರೀಕ್ಷೆಗಳನ್ನು ನಡೆಸುವ ಬಗ್ಗೆ,

## ಸೂಚನೆಗಳು

01. ಮೇಲ್ಕಂಡ ಪರೀಕ್ಷೆಗಳಿಗೆ ಹಾಜರಾಗಿ ಅನುತ್ತೀರ್ಣರಾಗಿರುವ ವಿದ್ಯಾರ್ಥಿಗಳಿಗೆ ಮತ್ತೊಮ್ಮೆ ಅವಕಾಶವಿರುವುದಿಲ್ಲ.

02. ಸಂಖ್ಯೆ: ತುವಿ:ಪ.ವಿ.:ವಿ.ನಿ.-03/2020-21:436 ದಿನಾಂಕ:05.12.2020 ರ ಸುತ್ತೋಲೆಯನ್ವಯ ಈಗಾಗಲೇ ಪರೀಕ್ಷಾ ಶುಲ್ಕ ಪಾವತಿಸಿ ಕಾರಣಾಂತರಗಳಿಂದ ಪರೀಕ್ಷೆಗಳಿಗೆ ಹಾಜರಾಗಲು ಸಾಧ್ಯವಾಗದೆ, ಮತ್ತೊಮ್ಮೆ ಪರೀಕ್ಷೆ ಬರೆಯಲು ಇಚ್ಛೆ ವ್ಯಕ್ತಪಡಿಸಿರುವ ವಿದ್ಯಾರ್ಥಿಗಳ ವಿವರಗಳನ್ನು ಇ.ಎಂ.ಎಸ್. ಆನ್‌ಲೈನ್ ತಂತ್ರಾಂಶದಲ್ಲಿ ನಮೂದಿಸಿದ್ದರೆ ಮತ್ತೊಮ್ಮೆ ನಮೂದಿಸುವಂತಿಲ್ಲ. ಈಗ ಯಾರಾದರೂ ಪರೀಕ್ಷೆ ಬರೆಯಲು ಇಚ್ಛೆ ವ್ಯಕ್ತಪಡಿಸಿದಲ್ಲಿ ಪರಿಗಣಿಸಿ ಅವಕಾಶ ನೀಡುವುದು. (ಈ ವಿದ್ಯಾರ್ಥಿಗಳಿಂದ ಶುಲ್ಕ ಪಾವತಿಸಿಕೊಳ್ಳುವಂತಿಲ್ಲ)

03. ಪರೀಕ್ಷಾ ಶುಲ್ಕ ಪಾವತಿಸಲು ಸಾಧ್ಯವಾಗದಿರುವ ವಿದ್ಯಾರ್ಥಿಗಳು ಮತ್ತೊಮ್ಮೆ ಪರೀಕ್ಷೆ ಬರೆಯಲು ಇಚ್ಛಿಸಿದಲ್ಲಿ ಉಲ್ಲೇಖ (01) ರ ಪರೀಕ್ಷಾ ಶುಲ್ಕಗಳನ್ವಯ ಸದರಿ ಅರ್ಹ ವಿದ್ಯಾರ್ಥಿಗಳಿಂದ ಈ ಕೆಳಗಿನಂತೆ ಪರೀಕ್ಷಾ ಶುಲ್ಕವನ್ನು ಪಾವತಿಸಿಕೊಳ್ಳುವುದು.

## ಗಮನಿಸಬೇಕಾದ ದಿನಾಂಕಗಳು

| | | |
|---|---|---|
| 1. | ವಿದ್ಯಾರ್ಥಿಗಳಿಗೆ ಶುಲ್ಕ ಪಾವತಿಸಲು ಕೊನೆಯ ದಿನಾಂಕ (ದಂಡ ರಹಿತ) | 16.01.2021 |
| 2. | ಕಾಲೇಜಿನವರು ಆನ್‌ಲೈನ್‌ನಲ್ಲಿ ವಿವರಗಳನ್ನು ನಮೂದಿಸಲು ಕೊನೆಯ ದಿನಾಂಕ | 18.01.2021 |
| 3. | ಕಾಲೇಜಿನವರು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಲು ಕೊನೆಯ ದಿನಾಂಕ (ಕಡ್ಡಾಯವಾಗಿ ಸಲ್ಲಿಸುವುದು) | 19.01.2021 |

(…2)

ಅರ್ಹ ವಿದ್ಯಾರ್ಥಿಗಳಿಂದ ಪರೀಕ್ಷಾ ಶುಲ್ಕವನ್ನು ವಿಶ್ವವಿದ್ಯಾನಿಲಯದ ಪರವಾಗಿ ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರು ಸಂಗ್ರಹಿಸಿ, ನಂತರ ಒಟ್ಟು ಶುಲ್ಕವನ್ನು ಕ್ರೋಢೀಕರಿಸಿ ವಿಶ್ವವಿದ್ಯಾನಿಲಯದ ನಿಧಿಗೆ RTGS/NEFT **ಮೂಲಕ ಎಸ್.ಬಿ.ಐ. ಖಾತೆ ನಂ. 36954908103 ಗೆ ಪರೀಕ್ಷಾ ಶುಲ್ಕವನ್ನು ದಿನಾಂಕ: 19.01.2021 ರೊಳಗೆ ಪಾವತಿಸಿ ಮತ್ತು ಪರೀಕ್ಷಾ ಶುಲ್ಕ ಪಾವತಿಸಿರುವ ವಿದ್ಯಾರ್ಥಿಗಳ ಪಟ್ಟಿಯನ್ನು ಸಂಬಂಧಿಸಿದ ದಾಖಲೆಗಳೊಂದಿಗೆ (ಜಾತಿ ಮತ್ತು ಆದಾಯ ಪ್ರಮಾಣ ಪತ್ರದ ನಕಲು ಪ್ರತಿ) ಪ್ರಾಂಶುಪಾಲರು ದೃಢೀಕರಿಸಿ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸುವುದು. ಪರೀಕ್ಷಾ ಶುಲ್ಕದ ಹಣಕಾಸು ಪಟ್ಟಿಯನ್ನು ದ್ವಿಪ್ರತಿಗಳಲ್ಲಿ. (ಪರೀಕ್ಷಾಂಗ ವಿಭಾಗಕ್ಕೆ ಒಂದು ಪ್ರತಿ ಮತ್ತು ಹಣಕಾಸು ವಿಭಾಗಕ್ಕೆ ಒಂದು ಪ್ರತಿಯನ್ನು ತಪ್ಪದೇ ಸಲ್ಲಿಸುವುದು).**

ಆನ್‌ಲೈನ್ ಪರೀಕ್ಷಾ ಅರ್ಜಿಗಳ ಆಧಾರದಲ್ಲಿ ಪ್ರಶ್ನೆ ಪತ್ರಿಕೆಗಳನ್ನು ವಿತರಿಸಲಿದ್ದು, ವಿಷಯಗಳಿಗೆ/ಪತ್ರಿಕೆಗಳಿಗೆ ಕೋಡ್‌ಗಳನ್ನು ಪರಿಶೀಲಿಸಿ ಆನ್‌ಲೈನ್ ಮೂಲಕ ಪರೀಕ್ಷಾ ಅರ್ಜಿಯನ್ನು ಸಲ್ಲಿಸತಕ್ಕದ್ದು. ಆನ್‌ಲೈನ್ ಪರೀಕ್ಷಾ ಅರ್ಜಿಯಲ್ಲಿ ವಿಷಯ/ಪತ್ರಿಕೆಗಳ ಕೋಡ್‌ನ್ನು ತಪ್ಪಾಗಿ ನಮೂದಿಸಿದಲ್ಲಿ ಈ ಕಾರಣದಿಂದಾಗಿ ಪ್ರಶ್ನೆ ಪತ್ರಿಕೆಯಲ್ಲಿನ ಸರಬರಾಜು ಮಾಡುವುದರಲ್ಲಿ ವ್ಯತ್ಯಾಸವಾದಲ್ಲಿ ಸಂಬಂಧಪಟ್ಟ ಪ್ರಾಂಶುಪಾಲರನ್ನೇ ನೇರವಾಗಿ ಜವಾಬ್ದಾರರನ್ನಾಗಿ ಮಾಡಲಾಗುವುದು.

**ಆನ್‌ಲೈನ್‌ನಲ್ಲಿ ನಮೂದಿಸುವಾಗ ಏನಾದರೂ ಸಮಸ್ಯೆ ಉಂಟಾದಲ್ಲಿ ಹೆಚ್ಚಿನ ಮಾಹಿತಿಗಾಗಿ ಗಣಕಯಂತ್ರ ವಿಭಾಗದವರನ್ನು ಕಛೇರಿ ವೇಳೆಯಲ್ಲಿ ಸಂಪರ್ಕಿಸುವುದು. (ಮೊಬೈಲ್ ಸಂಖ್ಯೆ: 8095371101)**

ಎಲ್ಲಾ ಪ್ರಾಂಶುಪಾಲರುಗಳು ಸಹಕರಿಸಬೇಕಾಗಿ ಕೋರಲಾಗಿದೆ.

ಆದೇಶದ ಮೇರೆಗೆ

ಕುಲಸಚಿವರು (ಪರೀಕ್ಷಾಂಗ)

ಗೆ,

ಪ್ರಾಂಶುಪಾಲರು, ಎಲ್ಲಾ ಸಂಯೋಜಿತ ಸ್ನಾತಕ ಶಿಕ್ಷಣ ಪದವಿ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಪ್ರತಿಗಳು:

1. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಎಂ.ಎಸ್. ಬಿಲ್ಡಿಂಗ್-2, ಡಾ. ಬಿ.ಆರ್. ಅಂಬೇಡ್ಕರ್ ವೀದಿ, ಬೆಂಗಳೂರು-560 001.
2. ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
3. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಉಪಕುಲಸಚಿವರು (ಶೈಕ್ಷಣಿಕ ವಿಭಾಗ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
6. ಮಾನ್ಯ ಕುಲಸಚಿವರ ಕಾರ್ಯಾಲಯ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
7. ಫಲಿತಾಂಶ ಗಣಕೀಕರಣ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
8. ಕಛೇರಿ ಪ್ರತಿ.